# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ: 10ನೇ ಫೆಬ್ರವರಿ, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

ಮೂರನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರಾಮಚಂದ್ರಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 43(310) : **ಮಾನ್ಯ ಉನ್ನತ ಶಿಕ್ಷಣ ಸಚಿವರು**

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ವರದಿಯನ್ನೊಪ್ಪಿಸುವುದು

**ಶ್ರೀ ಮರಿತಿಬ್ಬೇಗೌಡ (ಮಾನ್ಯ ಉಪಸಭಾಪತಿಗಳು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ)** ಅವರು ಖಾಸಗಿ ಸದಸ್ಯರುಗಳ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯನ್ನು ಒಪ್ಪಿಸುವುದು.

### 03. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ರಿಜ್ವಾನ್ ಅರ್ಷದ್** ಅವರು 2016-17ನೇ ಸಾಲಿನ ಬಿಬಿಎಂಪಿ ಆಯವ್ಯಯದಲ್ಲಿ "ಕಲ್ಯಾಣ ಕಾರ್ಯಕ್ರಮಗಳ" ಯೋಜನೆಗಾಗಿ ಮೀಸಲರಿಸಲಾಗಿರುವ ಅನುದಾನ ಅರ್ಹ ಫಲಾನುಭವಿಗಳಿಗೆ ತಲುಪದಿರುವ ಬಗ್ಗೆ **ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.**

ಆ) **ಶ್ರೀ ಎಸ್.ವ್ಹಿ. ಸಂಕನೂರ** ಅವರು 2010ನೇ ಸಾಲಿನ ಸರಕಾರಿ ಇಂಜಿನಿಯರಿಂಗ್ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರುಗಳಿಗೆ ಪದನಾಮ ಬದಲೀಕರಣ ಮಾಡಿ, ನಿಗದಿತ ವೇತನವನ್ನು ನೀಡದಿರುವ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಅನುಷ್ಠಾನಗೊಳಿಸದಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.**

**೦4. ನಿಯಮ ೩೩೦ರ ಮೇರೆಗೆ**

ಅ) **ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)** ಅವರು ಬಾಗಲಕೋಟೆ ಜಿಲ್ಲೆ, ಅಮೀನಗಡ ನಗರವು 16 ಸಾವಿರ ಜನಸಂಖ್ಯೆ ಹೊಂದಿರುವ ನಗರವಾಗಿದ್ದು, ಇಲ್ಲಿ ಕೂಲಿ ಕಾರ್ಮಿಕರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಬಡ ನೇಕಾರರು ಜೀವಿಸುತ್ತಿರುವುದರಿಂದ, ಸದರಿ ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ 50 ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯನ್ನು ತೆರೆಯುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

**ಆ) ಶ್ರೀ ಅಮರನಾಥ ಪಾಟೀಲ್** ಅವರು ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆಯನ್ನು ಖಾಯಂಗೊಳಿಸಿ ಹಾಗೂ ಅವರ ಸಮಸ್ಯೆಗಳ ಬಗ್ಗೆ ತಜ್ಞರ ಸಮಿತಿ ರಚಿಸಿ ಶಾಶ್ವತ ಪರಿಹಾರ ನೀಡದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಉನ್ನತ ಶಿಕ್ಷಣ ಸಚಿವರು)**

**೦5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ**

"2017ನೇ ಫೆಬ್ರವರಿ, ೦6ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ: 07.02.2017ರಂದು ಶ್ರೀ ಶರಣಪ್ಪ ಮಟ್ಟೂರ ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

(ಮೂರನೆಯ ದಿನ)

**೦6. ಖಾಸಗಿ ಸದಸ್ಯರ ಕಾರ್ಯಕಲಾಪಗಳು**

**ಖಾಸಗಿ ಸದಸ್ಯರ ವಿಧೇಯಕದ ಮಂಡನೆ**

**"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ", 2016:-**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** (ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು) ಅವರು:-

ಅ) 2016ನೇ ಸಾಲಿನ **"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ"**ವನ್ನು ಮಂಡಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**ಶ್ರೀನಿವಾಸ**
**ಕಾರ್ಯದರ್ಶಿ**

---